**ಟಾಪ್ ನ್ಯೂಸ್**

ಚನ್ನರಾಯಪಟ್ಟಣ ತಾಲೂಕಿನ ಶೆಟ್ಟಿಹಳ್ಳಿ ಸಮೀಪ ಅಪರಿಚಿತ ಕಾರು ಡಿಕ್ಕಿಯಾಗಿ ಬೈಕ್ ಸವಾರ ಬೆಂಗಳೂರಿನ ನಾಗರಬಾವಿ ನಿವಾಸಿ ಮಿಥುನ್ (21) ಮೃತಪಟ್ಟಿದ್ದು, ಹಿಂಬದಿ ಸವಾರ ರಾಜೇಶ್ ತೀವ್ರ ಗಾಯಗೊಂಡಿದ್ದಾರೆ.

ಸಾಹಿತಿ ಬರಗೂರು ರಾಮಚಂದ್ರಪ್ಪ ಅಭಿಪ್ರಾಯ | ಕಲ್ಯಾಣದಲ್ಲಿ ಡಾ.ಲಿಗಾಡೆ ಪ್ರತಿಷ್ಠಾನದ ಕಾರ್ಯಕ್ರಮ

# ಸಮಾನತೆ ಸೌಹಾರ್ದತೆ ಎರಡು ಕಣ್ಣುಗಳಿದ್ದಂತೆ

■ ವಿಜಯವಾಣಿ ಸುದ್ದಿಜಾಲ ಬಸವಕಲ್ಯಾಣ

ಭಾವನಾತ್ಮಕವಾಗಿ ಏಕತ್ವದ ಪ್ರತಿಪಾದನೆ ಮತ್ತು ಸಾಂಸ್ಕೃತಿಕವಾಗಿ ಬಹುತ್ವದ ಪ್ರತಿಪಾದನೆ ಇವೆರಡರ ಸೇರುವಿಕೆಯೇ ಸೌಹಾರ್ದತೆಯಾಗಿದೆ ಎಂದು ನಾಡಿನ ಹಿರಿಯ ಸಾಹಿತಿ, ಚಿಂತಕ ಪ್ರೊ.ಬರಗೂರು ರಾಮಚಂದ್ರಪ್ಪ ಹೇಳಿದರು.

ಬಿಕಟಿಯ ಬಸವಕಲ್ಯಾಣ ಇಂಜಿನಿಯರಿಂಗ್ ಕಾಲೇಜು ಸಹಯೋಗದಲ್ಲಿ ಡಾ.ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನದಿಂದ ಭಾನುವಾರ ಆಯೋಜಿಸಿದ್ದ ಪ್ರತಿಷ್ಠಾನದ 96ನೇ ಉಪನ್ಯಾಸ ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ: ಸಮಾನತೆ ಮತ್ತು ಸೌಹಾರ್ದತೆ ವಿಷಯ ಕುರಿತು ವಿಶೇಷ ಉಪನ್ಯಾಸ ನೀಡಿದ ಅವರು, ಸಮಾನತೆ ಮತ್ತು ಸೌಹಾರ್ದತೆ ದೇಶದ ಎರಡು ಕಣ್ಣುಗಳಿದ್ದಂತೆ ಎಂದು ಅಭಿಪ್ರಾಯಪಟ್ಟರು.

ಕನ್ನಡ ಜಗತ್ತನ್ನು ವೈಚಾರಿಕವಾಗಿ ರೂಪಿಸಿದ್ದು ವಚನಕಾರರು. ವಚನ ಸಾಹಿತ್ಯಕ್ಕೆ ಹೆಚ್ಚಿನ ಗೌರವ ಸಿಕ್ಕಿದ್ದೇ 70-80ರ ದಶಕದ ನಂತರದಲ್ಲಿ, ಅನಂತರ ವಚನಗಳ ಕುರಿತು ಭಿನ್ನ ಆಯಾಮಗಳಲ್ಲಿ ಅಧ್ಯಯನ ಆರಂಭವಾದವು. ದೇಹವೇ ದೇಗುಲ, ಶರಣ ಸತಿ ಲಿಂಗ ಪತಿ, ಕಾಯಕವೇ ಕೈಲಾಸ ಇಂಥ ಪರಿಕಲ್ಪನೆ ನೀಡಿದ ವಚನ ಚಳುವಳಿ ಭಕ್ತಿಯ ಖಾಸಗೀಕರಣಕ್ಕೆ ಮಹತ್ವ ನೀಡಿದೆ. ಬಸವಣ್ಣನವರು ರಾಜಾಶ್ರಯದಲ್ಲಿ ಇದ್ದು ಚಳುವಳಿ ರೂಪಿಸಿದ್ದರು. ಪಂಪ ರಾಜಾಶ್ರಯದಲ್ಲಿ ವ್ಯವಸ್ಥೆಯನ್ನು ವಿರೋಧಿಸಿದ್ದನು ಎಂದು ಹೇಳಿದರು.



ಬಸವಕಲ್ಯಾಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಬರಗೂರು ರಾಮಚಂದ್ರಪ್ಪ ಬರೆದ ಸೌಹಾರ್ದ ಭಾರತ ಪುಸ್ತಕ ಓದುಗರಿಗೆ ನೀಡಿ ಸಮಾರಂಭ ಉದ್ಘಾಟಿಸಲಾಯಿತು. ಹಿರಿಯ ಸಾಹಿತಿ ಬರಗೂರು ರಾಮಚಂದ್ರಪ್ಪ, ಡಾ.ಅಶೋಕಕುಮಾರ ವಣಗೀರೆ, ಪ್ರೊ. ಬಿ.ಎಸ್. ಬಿರಾದಾರ, ಡಾ.ಜಗನ್ನಾಥ ಹೆಬ್ಬಾಳೆ, ಪ್ರೇಮಸಾಗರ ಪಾಟೀಲ, ಡಾ.ಭೀಮಾಶಂಕರ ಬಿರಾದಾರ, ಎಸ್.ಜಿ. ಹುಡೇದ, ದೇವೇಂದ್ರ ಬರಗಾಲೆ, ಡಾ.ಶಿವಾಜಿ ಮೇತ್ರೆ, ಚಂದ್ರಕಾಂತ ಅಕ್ಕಣ್ಣ ಇದ್ದರು.

ಬೀದರ್ ವಿವಿದ್ಯಾಲಯದ ಕುಲಪತಿ ಪ್ರೊ.ಬಿ.ಎಸ್.ಬಿರಾದಾರ ಮಾತನಾಡಿ, ಕನ್ನಡ ಸಾಹಿತ್ಯ ಆರಂಭದಿಂದಲೂ ಸಮಾನತೆ ಮತ್ತು ಸೌಹಾರ್ದತೆಯ ಪಾಠ ಮಾಡುತ್ತಾ ಬಂದಿದೆ. ಅದನ್ನು ಗ್ರಹಿಸುವ, ಅರ್ಥೈಸುವ ಪ್ರಯತ್ನ ನಡೆಯಬೇಕಾದ ಅವಶ್ಯಕತೆ ಇದೆ ಎಂದರು.

ಬೀದರ್‌ನ ಸಾಹಿತಿ ಡಾ.ಜಗನ್ನಾಥ ಹೆಬ್ಬಾಳೆ ಮಾತನಾಡಿ, ಕನ್ನಡದ ಸಾಕ್ಷಿ ಪ್ರಜ್ಞೆಯಾಗಿರುವ ಬರಗೂರರು ತಮ್ಮ ಕನ್ನಡ ಪರ ಕೆಲಸಗಳಿಂದ ಮನೆಮಾತಾಗಿದ್ದಾರೆ ಎಂದು ಹೇಳಿದರು.

ಪ್ರಾಚಾರ್ಯ ಡಾ.ಅಶೋಕಕುಮಾರ ವಣಗೀರೆ ಅಧ್ಯಕ್ಷತೆ ವಹಿಸಿದ್ದರು. ಡಾ.ಭೀಮಾಶಂಕರ ಬಿರಾದಾರ ಪ್ರಾಸ್ತಾವಿಕ ಮಾತನಾಡಿದರು. ಪ್ರೇಮಸಾಗರ ಪಾಟೀಲ ಸ್ವಾಗತಿಸಿದರು. ಎಸ್.ಜಿ. ಹುಡೇದ ವಂದಿಸಿದರು. ದೇವೇಂದ್ರ ಬರಗಾಲೆ ನಿರೂಪಣೆ ಮಾಡಿದರು.

ಬರಗೂರು ರಾಮಚಂದ್ರಪ್ಪ ಅವರು ಬರೆದ ಸೌಹಾರ್ದ ಭಾರತ ಪುಸ್ತಕ ಓದುಗರಿಗೆ ನೀಡುವ ಮೂಲಕ ಸಮಾರಂಭ ಉದ್ಘಾಟಿಸಲಾಯಿತು. ಅಂತಾರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ನಟ ಆಕಾಂಕ್ಷ ಬರಗೂರು, ಉಪಪ್ರಾಚಾರ್ಯ ಡಾ.ಅರುಣಕುಮಾರ ಯಲಾಲ್, ಡಾ.ಶಿವಾಜಿ ಮೇತ್ರೆ, ಚಂದ್ರಕಾಂತ ಅಕ್ಕಣ್ಣ, ಸಂಜುಕುಮಾರ ನಡುಕರ , ಮನೋಜಕುಮಾರ, ಶರಣಪ್ಪ ಗದಲೆಗಾಂವ ಇತರರಿದ್ದರು.

> ಕರ್ನಾಟಕವೆಂದರೇ ಬರಿ ನಕಾಶೆವಲ್ಲ. ನದಿ, ಹಳ್ಳ, ಹಳ್ಳಿ, ನೆಲ, ಕಾಡು ಎಲ್ಲವೂ ಇದೆ. ನಿಸರ್ಗದಲ್ಲಿ ಯಾವುದು ಕನಿಷ್ಠ, ಶ್ರೇಷ್ಠ ಎಂಬುವುದಿಲ್ಲ. ಗಂಧದ ಮರ ಎಷ್ಟು ಮುಖ್ಯವೋ ಅಷ್ಟೇ ಮುಖ್ಯ ಜಾಲಿಮರ. ಕೋಗಿಲೆಯಷ್ಟೇ ಕಾಗೆಯು ಮುಖ್ಯ. ನಿಸರ್ಗದಲ್ಲಿಯೇ ಭೇದ ಭಾವ ಮಾಡುವುದು ಸರಿ ಅಲ್ಲ.
>
> | ಪ್ರೊ.ಬರಗೂರು ರಾಮಚಂದ್ರಪ್ಪ
> ಹಿರಿಯ ಸಾಹಿತಿ, ಚಿಂತಕ

ಕನ್ನಡಪ್ರಭ

# ಸಂವಾದ ಪ್ರಜಾಪ್ರಭುತ್ವದ ಪ್ರಧಾನ ತತ್ವ

## ಪ್ರೊ.ಬರಗೂರು ಪ್ರತಿಪಾದನೆ | 96ನೇ ಉಪನ್ಯಾಸ ಸಮಾರಂಭದಲ್ಲಿ 'ಕನ್ನಡ ಸಾಹಿತ್ಯ: ಸಮಾನತೆ ಮತ್ತು ಸೌಹಾರ್ದತೆ' ಗೋಷ್ಠಿ

• **ಕನ್ನಡಪ್ರಭ ವಾರ್ತೆ** ಬಸವಕಲ್ಯಾಣ

ಸಂವಾದ ಪ್ರಜಾಪ್ರಭುತ್ವದ ಪ್ರಧಾನ ತತ್ವ. ಸಂವಾದದಲ್ಲಿ ಸಹಿಷ್ಣುತೆ, ಅಭಿಪ್ರಾಯ, ಭಿನ್ನಾಭಿಪ್ರಾಯಗಳಿಗೂ ಮನ್ನಣೆ ದೊರೆಯುತ್ತದೆ ಎಂದು ಹಿರಿಯ ಚಿಂತಕ ಪ್ರೊ ಬರಗೂರು ರಾಮಚಂದ್ರಪ್ಪ ಹೇಳಿದರು.

ಬಸವಕಲ್ಯಾಣ ಇಂಜಿನಿಯರಿಂಗ್ ಕಾಲೇಜು ಸಹಯೋಗದಲ್ಲಿ ಡಾ. ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನದಿಂದ ಹಮ್ಮಿಕೊಂಡಿದ್ದ ಪ್ರತಿಷ್ಠಾನದ 96ನೇ ಉಪನ್ಯಾಸ ಸಮಾರಂಭದಲ್ಲಿ 'ಕನ್ನಡ ಸಾಹಿತ್ಯ: ಸಮಾನತೆ ಮತ್ತು ಸೌಹಾರ್ದತೆ' ಕುರಿತು ಮಾತನಾಡಿದ ಅವರು, ಬಹುತ್ವ ಹಾಗೂ ಏಕತ್ವಗಳ ಒಂದತ್ವಗಳೆ ಸೌಹಾರ್ದತೆಯಾಗಿದೆ ಎಂದರು.

ವಿವೇಕ ಜಾಗದಲ್ಲಿ ಉದ್ರೇಕ, ಸತ್ಯದ ಜಾಗದಲ್ಲಿ ಅಸತ್ಯ ಬಂದು ನೆಲೆಸಿವೆ. ವಿಚಾರ ಮತ್ತು ವಿಕಾರಗಳ ನಡುವಿನ ಅಂತರ ಕಡಿಮೆಯಾಗಿದೆ ಎಂದರು. ಕನ್ನಡ ಸಾಹಿತ್ಯ ಜಾತಿ- ಕುಲ ವ್ಯವಸ್ಥೆಯನ್ನು, ಲಿಂಗ ತಾರತಮ್ಯವನ್ನು ವಿರೋಧಿಸಿದೆ. ಪರಂಪರೆಗೆ ಚಲನಶೀಲತೆ ಇರುತ್ತದೆ. ಸಂಪ್ರದಾಯಕ್ಕೆ ಜಡತೆ ಇರುತ್ತದೆ. ಸಂಸ್ಕೃತಿಯೂ ಏಕ ಕಾಲದಲ್ಲಿ ಚಲನ ಶೀಲತೆ ಮತ್ತು ಜಡವು ಆಗಿರುತ್ತದೆ ಎಂದರು.

ದೇಹವೇ ದೇಗುಲ, ಶರಣ ಸತಿ ಲಿಂಗ ಪತಿ, ಕಾಯಕವೇ ಕೈಲಾಸ ಇಂಥ ಪರಿಕಲ್ಪನೆ ನೀಡಿದ ವಚನ ಚಳುವಳಿ ಭಕ್ತಿಯ ಖಾಸಗೀಕರಣಕ್ಕೆ ಮಹತ್ವ ನೀಡಿದೆ. ಬಸವಣ್ಣನವರು ರಾಜಾಶ್ರಯದಲ್ಲಿ ಇದ್ದು ಚಳುವಳಿ ರೂಪಿಸಿದ್ದರು. ಪಂಪ ರಾಜಾಶ್ರಯದಲ್ಲಿ ವ್ಯವಸ್ಥೆಯನ್ನು ವಿರೋಧಿಸಿದ್ದನು ಎಂದರು.



ಇಂಜಿನಿಯರಿಂಗ್ ಕಾಲೇಜಿನಲ್ಲಿ ಡಾ. ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನದಿಂದ ಹಮ್ಮಿಕೊಂಡಿದ್ದ 'ಕನ್ನಡ ಸಾಹಿತ್ಯ: ಸಮಾನತೆ ಮತ್ತು ಸೌಹಾರ್ದತೆ' ಕುರಿತು ಚಿಂತಕ ಪ್ರೊ.ಬರಗೂರು ರಾಮಚಂದ್ರಪ್ಪ ಮಾತನಾಡಿದರು.

ಬೀದರ್‌ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಎಸ್ .ಬಿರಾದಾರ್ ಮಾತನಾಡಿ, ಕನ್ನಡ ಸಾಹಿತ್ಯ ಆರಂಭದಿಂದಲೂ ಸಮಾನತೆ ಮತ್ತು ಸೌಹಾರ್ದತೆಯ ಪಾಠ ಮಾಡುತ್ತಾ ಬಂದಿದೆ. ಅದನ್ನು ಗ್ರಹಿಸುವ, ಅರ್ಥೈಸುವ ಪ್ರಯತ್ನ ಮತ್ತೆ ಮತ್ತೆ ಮಾಡಬೇಕಿದೆ ಎಂದರು.

ಹಿರಿಯ ಸಾಹಿತಿ ಡಾ.ಜಗನ್ನಾಥ ಹೆಬ್ಬಾಳೆ ಮಾತನಾಡಿ, ಕನ್ನಡದ ಸಾಕ್ಷಿಪ್ರಜ್ಞೆಯಾಗಿರುವ ಬರಗೂರರು ತಮ್ಮ ಕನ್ನಡ ಪರ ಕೆಲಸಗಳಿಂದ ಮನೆಮಾತಾಗಿದ್ದಾರೆ. ಅವರುತಾಯಿಪ್ರೀತಿಯಜಾಯಮಾನವರು. ಎಂದಿಗೂ ಈ ನೆಲದ ಪ್ರಜಾಪ್ರಭುತ್ವದ, ಸಮಾನತೆಯ ಬಗೆಗೆ ಧ್ಯಾನಿಸಿದವರು ಎಂದರು.

ಕಾಲೇಜು ಪ್ರಾಚಾರ್ಯ ಡಾ.ಅಶೋಕ ಕುಮಾರ ವಣಗೀರೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅಂತಾರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ನಟ ಆಕಾಂಕ್ಷ ಬರಗೂರು, ಉಪ ಪ್ರಾಚಾರ್ಯ ಡಾ ಅರುಣ್ ಕುಮಾರ್‌ಯಲಾಲ್, ಚಂದ್ರಕಾಂತ ಅಕ್ಕಣ್ಣ, ಸಂಜು ಕುಮಾರ ನಡುಕರ , ಅನೋಜಕುಮಾರ, ಶರಣಪ್ಪ ಗದಲೆಗಾಂವ, ಪ್ರತಿಷ್ಠಾನದ ನಿರ್ದೇಶಕರಾದ ಡಾ.ಭೀಮಾಶಂಕರ ಬಿರಾದಾರ, ಡಾ.ಶಿವಾಜಿ ಮೇತ್ರೆ ಇದ್ದರು. ರಿಜಿಸ್ಟ್ರಾರ್‌ಪ್ರೇಮಸಾಗರ ಪಾಟೀಲ ಸ್ವಾಗತಿಸಿ. ಪ್ರತಿಷ್ಠಾನದ ಕಾರ್ಯದರ್ಶಿ ದೇವೇಂದ್ರ ಬರಗಾಲೆ ನಿರೂಪಿಸಿ, ಪ್ರತಿಷ್ಠಾನದ ಅಧ್ಯಕ್ಷ ಎಸ್.ಜಿ.ಹುಡೇದ ವಂದಿಸಿದರು.

ಜನದನಿಯ ಸಾರಥಿ
ವಾರ್ತಾ ಭಾರತಿ

# ವಚನಕಾರರಿಂದ ಕನ್ನಡ ಜಗತ್ತಿಗೆ ವೈಚಾರಿಕ ರೂಪ

## ಬರಗೂರು ರಾಮಚಂದ್ರಪ್ಪ



ಬಸವಕಲ್ಯಾಣ, ಜ.26: ಎಪ್ಪತ್ತು ಎಂಬತ್ತರ ದಶಕದ ನಂತರದಲ್ಲಿ ವಚನ ಸಾಹಿತ್ಯಕ್ಕೆ ಸಾಹಿತ್ಯದ ಮನ್ನಣೆ ದೊರೆತಿದೆ. ಅನಂತರದಲ್ಲಿ ವಚನಗಳ ಕುರಿತು ಭಿನ್ನ ಆಯಾಮಗಳಲ್ಲಿ ಅಧ್ಯಯನ ಆರಂಭವಾದವು. ಕನ್ನಡ ಜಗತ್ತನ್ನು ವೈಚಾರಿಕವಾಗಿ ರೂಪಿಸಿದ್ದು ವಚನಕಾರರು ಎಂದು ಹಿರಿಯ ಸಾಹಿತಿ ಪ್ರೊ.ಬರಗೂರು ರಾಮಚಂದ್ರಪ್ಪ ಹೇಳಿದರು.

ಡಾ.ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನದಿಂದ ನಗರದ ಬಸವಕಲ್ಯಾಣ ಇಂಜಿನಿಯರಿಂಗ್ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಪ್ರತಿಷ್ಠಾನದ 96ನೆ ಉಪನ್ಯಾಸ ಸಮಾರಂಭದಲ್ಲಿ 'ಕನ್ನಡ ಸಾಹಿತ್ಯ: ಸಮಾನತೆ ಮತ್ತು ಸೌಹಾರ್ದತೆ' ವಿಷಯದ ಕುರಿತು ಅವರು ಮಾತನಾಡಿದರು.

ತನ್ನ ಸಮಾಜದ, ದೇಶದ ಸೌಹಾರ್ದತೆಗೆ, ಸಮಾನತೆಗೆ ಧಕ್ಕೆ ಬಂದಾಗ ಸಾಹಿತ್ಯವು ಕಾಲದ ದನಿಯಾಗಿದೆ. ಎಲ್ಲರೂ ಕಾಲದ ದನಿಯಾಗುವ ನಿಟ್ಟಿನಲ್ಲಿ ಪ್ರಯತ್ನಿಸಬೇಕು. ಕನ್ನಡವನ್ನು ಧರ್ಮ ತಾರತಮ್ಯವಿಲ್ಲದೆ, ಲಿಂಗ ತಾರತಮ್ಯವಿಲ್ಲದೆ, ಜಾತಿ ತಾರತಮ್ಯವಿಲ್ಲದೆ ಕಟ್ಟಲಾಗಿದೆ. ಜೈನರು, ಲಿಂಗಾಯತರು, ಬ್ರಾಹ್ಮಣರು, ಕ್ರೈಸ್ತರು ಎಲ್ಲರು ಕನ್ನಡ ಜಗತ್ತನ್ನು ಕಟ್ಟಿದ್ದಾರೆ. ಹಾಗಾಗಿಯೇ ಕನ್ನಡ ಸಾಹಿತ್ಯ ಎಂದಿಗೂ ಸಮಾನತೆ ಮತ್ತು ಸೌಹಾರ್ದತೆ ಪ್ರತಿಪಾದಿಸುತ್ತದೆ. ಸಂವಾದ ಪ್ರಜಾಪ್ರಭುತ್ವದ ಪ್ರಧಾನ ತತ್ವವಾಗಿದೆ.

> ವಿವೇಕದ ಜಾಗದಲ್ಲಿ ಉದ್ರೇಕ, ಸತ್ಯದ ಜಾಗದಲ್ಲಿ ಅಸತ್ಯ ಬಂದು ನೆಲೆಸಿವೆ. ವಿಚಾರ ಮತ್ತು ವಿಕಾರಗಳ ನಡುವಿನ ಅಂತರ ಕಡಿಮೆಯಾಗಿದೆ. ಕನ್ನಡ ಸಾಹಿತ್ಯ ಜಾತಿ, ಕುಲ ವ್ಯವಸ್ಥೆಯನ್ನು, ಲಿಂಗ ತಾರತಮ್ಯವನ್ನು ವಿರೋಧಿಸಿದೆ. ಪರಂಪರೆಗೆ ಚಲನಶೀಲತೆ ಇರುತ್ತದೆ. ಸಂಪ್ರದಾಯಕ್ಕೆ ಜಡತೆ ಇರುತ್ತದೆ. ಸಂಸ್ಕೃತಿಯೂ ಏಕ ಕಾಲದಲ್ಲಿ ಚಲನಶೀಲತೆ ಮತ್ತು ಜಡವು ಆಗಿರುತ್ತದೆ ಎಂದು ಬರಗೂರು ಹೇಳಿದರು.

ಸಂವಾದದಲ್ಲಿ ಸಹಿಷ್ಣುತೆ, ಅಭಿಪ್ರಾಯ, ಭಿನ್ನಾಭಿಪ್ರಾಯಗಳಿಗೂ ಮನ್ನಣೆ ದೊರೆಯುತ್ತದೆ ಎಂದು ಬರಗೂರು ಹೇಳಿದರು.

ಬೀದರ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಬಿ.ಎಸ್. ಬಿರಾದಾರ್, ಹಿರಿಯ ಸಾಹಿತಿ ಡಾ.ಜಗನ್ನಾಥ್ ಹೆಬ್ಬಾಳೆ ಮಾತನಾಡಿದರು.

ಪ್ರತಿಷ್ಠಾನದ ನಿರ್ದೇಶಕ ಡಾ. ಭೀಮಾಶಂಕರ್ ಬಿರಾದಾರ್, ಕಾಲೇಜು ಪ್ರಾಚಾರ್ಯ ಡಾ. ಅಶೋಕಕುಮಾರ್ ವಣಗೀರೆ, ಅಂತಾರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ನಟ ಆಕಾಂಕ್ಷ ಬರಗೂರು, ಉಪ ಪ್ರಾಚಾರ್ಯ ಡಾ.ಅರುಣಕುಮಾರ್ ಯಲಾಲ್, ಪ್ರತಿಷ್ಠಾನದ ನಿರ್ದೇಶಕ ಡಾ.ಶಿವಾಜಿ ಮೇತ್ರೆ, ಚಂದ್ರಕಾಂತ್ ಅಕ್ಕಣ್ಣ, ಸಂಜುಕುಮಾರ್ ನಡುಕರ್, ಅನೋಜ ಕುಮಾರ್, ಶರಣಪ್ಪ ಗದಲೆಗಾಂವ್ ಉಪಸ್ಥಿತರಿದ್ದರು. ಪ್ರೇಮಸಾಗರ್ ಪಾಟೀಲ್ ಸ್ವಾಗತಿಸಿದರು. ಪ್ರತಿಷ್ಠಾನದ ಕಾರ್ಯದರ್ಶಿ ದೇವೇಂದ್ರ ಬರಗಾಲೆ ಕಾರ್ಯಕ್ರಮ ನಿರೂಪಿಸಿದರು. ಪ್ರತಿಷ್ಠಾನದ ಅಧ್ಯಕ್ಷ ಎಸ್.ಜಿ. ಹುಡೇದ್ ವಂದಿಸಿದರು.

ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಶುದ್ಧ ಇಂಧನವು ಆರೋಗ್ಯಕರ, ಸುರಕ್ಷಿತ ಮತ್ತು ಭೂಮಿಯನ್ನು ಮುಂದಿನ ಪೀಳಿಗೆಗೆ ಉಳಿಸಲು ಪ್ರಮುಖ ಹಂತವಾಗಿದೆ. ಹೈಡ್ರೋಜನ್, ಸೌರ ಮತ್ತು ಪವನ ಶಕ್ತಿ ಇವು ಮಾಲಿನ್ಯವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತವೆ. ಇವುಗಳ ಉತ್ಪಾದನೆ, ಬಳಕೆಗೆ ಪ್ರೋತ್ಸಾಹ ನೀಡುವುದು ಪ್ರಸ್ತುತ ಎಸ್. ಬಿರಾದಾರ, ಸಂಸ್ಥೆಯ ಅಧ್ಯಕ್ಷ ಅಮರ ಜಿ.ಬಂಗರಗಿ, ಶಾಲೆಯ ಮುಖ್ಯ ಶಿಕ್ಷಕಿ ಚಂಪಾಕಲಾ ನೆಲ್ಲುರೆ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಸುಕುಮಾರ ರಮ್ಯ ಜಗತ್ತನ್ನು ಅದ್ಭುತವಾಗಿ ಬಿಡಿಸಿಡುವುದರ ಮೂಲಕ ಕೌಟುಂಬಿಕ ಸಂಬಂಧಗಳನ್ನು ಘನಗೊಳಿಸಿದ ನರಸಿಂಹಸ್ವಾಮಿ ಕನ್ನಡಿಗರ ಭಾವಕೋಶದಲ್ಲಿ

# ವೈಚಾರಿಕ ಜಗತ್ತು ರೂಪಿಸಿದ್ದು ವಚನ ಚಳುವಳಿ : ಪ್ರೊ. ಬರಗೂರು ರಾಮಚಂದ್ರಪ್ಪ

(ವರದಿ:ನಾಗಪ್ಪ ನಿಣ್ಣೆ)

ಬಸವಕಲ್ಯಾಣ: ವಚನ ಚಳುವಳಿ ಸಮಾನತೆ ಮತ್ತು ಸೌಹಾರ್ದತೆ ಸಾಧಿಸಿದ ಚಳುವಳಿಯಾಗಿದೆ. ಕನ್ನಡ ಜಗತ್ತನ್ನು ವೈಚಾರಿಕವಾಗಿ ರೂಪಿಸಿದ್ದು ವಚನಕಾರರು ಎಂದು ಹಿರಿಯ ಚಿಂತಕ ಪ್ರೊ. ಬರಗೂರು ರಾಮಚಂದ್ರಪ್ಪ ಹೇಳಿದರು.

ನಗರದ ಬಸವಕಲ್ಯಾಣ ಇಂಜಿನಿಯರಿಂಗ್ ಕಾಲೇಜು ಸಹಯೋಗದಲ್ಲಿ ಡಾ. ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನದಿಂದ ಹಮ್ಮಿಕೊಂಡಿದ್ದ ಪ್ರತಿಷ್ಠಾನದ

೯೬ನೇ ಉಪನ್ಯಾಸ ಸಮಾರಂಭದಲ್ಲಿ 'ಕನ್ನಡ ಸಾಹಿತ್ಯ: ಸಮಾನತೆ ಮತ್ತು ಸೌಹಾರ್ದತೆ ' ಕುರಿತು ಮಾತನಾಡಿದ ಅವರು,

ವಚನ ಸಾಹಿತ್ಯಕ್ಕೆ ಸಾಹಿತ್ಯದ ಮನ್ನಣೆ ದೊರೆತದ್ದು ಎಪ್ಪತ್ತು ಎಂಬತ್ತರ ದಶಕದ ನಂತರ. ಅನಂತರ ವಚನಗಳ ಕುರಿತು ಭಿನ್ನ ಆಯಾಮಗಳಲ್ಲಿ ಅಧ್ಯಯನ ಆರಂಭವಾದವು ಎಂದ ಅವರು

ದೇಹವೇ ದೇಗುಲ ಎಂಬ ಪರಿಕಲ್ಪನೆ ಭಕ್ತಿಯ ಖಾಸಗೀಕರಣಕ್ಕೆ ಅದ್ಭುತ ನೀಡಿದೆ. ಈ ಆಲೋಚನೆ ಉಳ್ಳವರಂತ ವೈಯಕ್ತಿಕ ನೆಲೆಯ ಭಕ್ತಿಗೆ ಮಹತ್ವ ತಂದಿದೆ. ಶರಣ ಸತಿ ಲಿಂಗ ಪತಿ, ಕಾಯಕವೇ ಕೈಲಾಸ ಇಂಥ ಪರಿಕಲ್ಪನೆ ನೀಡಿದ ವಚನ ಚಳುವಳಿ ಜನಪರವಾದದ್ದು. ಬಸವಣ್ಣನವರು ರಾಜಾಶ್ರಯದಲ್ಲಿ ಇದ್ದು ಚಳುವಳಿ ರೂಪಿಸಿದ್ದರು. ಪಂಪ ರಾಜಾಶ್ರಯದಲ್ಲಿ ಜಾತಿ ವ್ಯವಸ್ಥೆಯನ್ನು ವಿರೋಧಿಸಿದ್ದನು ಎಂದರು.



ಸೌಹಾರ್ದತೆ -ಸಮಾನತೆ ಪ್ರಜಾಪ್ರಭುತ್ವದ ತಾತ್ವಿಕತೆಯಾಗಿದೆ. ಸಂವಾದಗಳು ಸಾಧ್ಯವಾಗದ ಕಾಲಘಟ್ಟದಲ್ಲಿ ಇದ್ದೇವೆ. ಸಂವಾದ, ವಾಗ್ವಾದಗಳು ಪ್ರಜಾಪ್ರಭುತ್ವ ಜೀವಂತಿಕೆಗೆ ಪ್ರಧಾನ ಸತ್ವವಾಗಿವೆ. ಸಂವಾದದಲ್ಲಿ ಅಭಿಪ್ರಾಯ, ಭಿನ್ನಾಭಿಪ್ರಾಯ, ಸಹಿಷ್ಣುತೆಗಳಿಗೆ ಮನ್ನಣೆ ದೊರೆಯುತ್ತದೆ. ಬಹುತ್ವ ಹಾಗೂ ಏಕತ್ವಗಳ ಒಂದತ್ವಗಳೆ ಸೌಹಾರ್ದತೆಯಾಗಿದೆ ಎಂದರು. ಉದ್ರೇಕ, ಸತ್ಯದ ಜಾಗದಲ್ಲಿ ಅಸತ್ಯ ಬಂದು ನೆಲೆಸಿದೆ. ವಿಚಾರ ಮತ್ತು ವಿಕಾರಗಳ ನಡುವಿನ ಅಂತರ ಕಡಿಮೆಯಾಗಿದೆ.

ಕನ್ನಡ ಸಾಹಿತ್ಯ ಜಾತಿ- ಕುಲ ವ್ಯವಸ್ಥೆಯನ್ನು ವಿರೋಧಿಸಿದೆ. ಲಿಂಗ ತಾರತಮ್ಯವನ್ನು ವಿರೋಧಿಸಿದೆ. ಪರಂಪರೆಗೆ ಚಲನಶೀಲತೆ ಇರುತ್ತದೆ. ಸಂಪ್ರದಾಯಕ್ಕೆ ಜಡತೆ ಇರುತ್ತದೆ. ಸಂಸ್ಕೃತಿಯೂ ಏಕ ಕಾಲದಲ್ಲಿ ಚಲನಶೀಲತೆ ಮತ್ತು ಜಡತ್ವವನ್ನು ಒಳಗೊಂಡಿರುತ್ತದೆ ಎಂದರು.

ನಾವು ಜೀವಿಸುವ ಸಮಾಜದ ಸಹಬಾಳ್ವೆಗೆ, ದೇಶದ ಸೌಹಾರ್ದತೆಗೆ , ಸಮಾನತೆಗೆ ಧಕ್ಕೆ ಬಂದಾಗ ಪ್ರಜ್ಞಾವಂತರು ಆ ಕಾಲದ ದನಿಯಾಗಬೇಕು. ಜಡತ್ವಕ್ಕೆ ಕನ್ನಡ ಸಾಹಿತ್ಯವು ಕಾಲದ ದನಿಯಾಗಿದೆ. ಸಮಕಾಲೀನ ಸೌಹಾರ್ದತೆಗೆ -ಸಮಾನತೆಗೆ ಧಕ್ಕೆ ಬಂದಾಗ ಎಲ್ಲರೂ ಕಾಲದ ದನಿಯಾಗುವ ನಿಟ್ಟಿನಲ್ಲಿ ಪ್ರಯತ್ನಿಸಬೇಕು ಎಂದರು.

ಧರ್ಮ ತಾರತಮ್ಯವಿಲ್ಲದೆ, ಲಿಂಗ ತಾರತಮ್ಯವಿಲ್ಲದೆ, ಜಾತಿ ತಾರತಮ್ಯವಿಲ್ಲದೆ ಕನ್ನಡವನ್ನು ಕಟ್ಟಲಾಗಿದೆ. ಜೈನರು, ಲಿಂಗಾಯತರು, ಬ್ರಾಹ್ಮಣರು, ಕ್ರೈಸ್ತರು, ಮುಸ್ಲಿಂರು ಸೇರಿದಂತೆ ಎಲ್ಲರೂ ಕನ್ನಡ ಜಗತ್ತನ್ನು ಕಟ್ಟಿದ್ದಾರೆ. ಹಾಗಾಗಿಯೇ ಕನ್ನಡ ಸಾಹಿತ್ಯ ಎಂದಿಗೂ ಸಮಾನತೆ ಮತ್ತು ಸೌಹಾರ್ದತೆ ಪ್ರತಿಪಾದಿಸುತ್ತದೆ ಎಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಬೀದರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ. ಎಸ್. ಬಿರಾದಾರ ಮಾತನಾಡಿ, ಕನ್ನಡ ಸಾಹಿತ್ಯ ಆರಂಭದಿಂದಲೂ ಸಮಾನತೆ ಮತ್ತು ಸೌಹಾರ್ದತೆಯ ಪಾಠ ಮಾಡುತ್ತಾ ಬಂದಿದೆ. ಅದನ್ನು ಗ್ರಹಿಸುವ, ಅರ್ಥೈಸುವ ಪ್ರಯತ್ನ ಮತ್ತೆ ಮತ್ತೆ ಮಾಡಬೇಕಿದೆ ಎಂದರು.

ಹಿರಿಯ ಸಾಹಿತಿ ಡಾ. ಜಗನ್ನಾಥ ಹೆಬ್ಬಾಳೆ ಅವರು ಮಾತನಾಡಿ, ಕನ್ನಡದ ಸಾಕ್ಷಿ ಪ್ರಜ್ಞೆಯಾಗಿರುವ ಬರಗೂರರು ತಮ್ಮ ಕನ್ನಡ ಪರ ಕೆಲಸಗಳಿಂದ ಮನೆಮಾತಾಗಿದ್ದಾರೆ. ಅವರು ತಾಯಿ ಪ್ರೀತಿಯ ಜಾಯಮಾನವರು. ಎಂದಿಗೂ ಈ ನೆಲದ ಪ್ರಜಾಪ್ರಭುತ್ವದ, ಸಮಾನತೆಯ ಬಗೆಗೆ ಧ್ಯಾನಿಸಿದವರು ಎಂದರು.

ಅಧ್ಯಕ್ಷತೆ ವಹಿಸಿದ್ದ ಬಿ.ಕೆ.ಐ.ಟಿ ಕಾಲೇಜು ಪ್ರಾಚಾರ್ಯ ಡಾ. ಅಶೋಕ ಕುಮಾರ ವಗ್ಗೀರೆ, ಪ್ರತಿಷ್ಠಾನದ ನಿರ್ದೇಶಕ ಡಾ. ಭೀಮಾಶಂಕರ ಬಿರಾದಾರ ಮಾತನಾಡಿದರು.

ಬರಗೂರು ರಾಮಚಂದ್ರಪ್ಪ ಅವರು ಬರೆದ 'ಸೌಹಾರ್ದ ಭಾರತ' ಪುಸ್ತಕ ಓದುಗರಿಗೆ ನೀಡುವ ಮೂಲಕ ಸಮಾರಂಭ ಉದ್ಘಾಟಿಸಲಾಯಿತು.

ಅಂತಾರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ನಟ ಅಶೋಕ್ ಬರಗೂರು, ಉಪ ಪ್ರಾಚಾರ್ಯ ಡಾ. ಅರುಣ್ ಕುಮಾರ್ ಯಲಾಲ್, ಪ್ರತಿಷ್ಠಾನದ ನಿರ್ದೇಶಕ ಡಾ. ಶಿವಾಜಿ ಮೇತ್ರೆ, ಚಂದ್ರಕಾಂತ ಅಕ್ಕಣ್ಣ, ಸಂಜು ಕುಮಾರ ನಡುಕರ . ಅನೋಜಕುಮಾರ, ಶರಣಪ್ಪ ಗದಲೆಗಾಂವ ವೇದಿಕೆಯಲ್ಲಿದ್ದರು.

ರಿಜಿಸ್ಟ್ರಾರ್ ಪ್ರೇಮಸಾಗರ ಪಾಟೀಲ ಸ್ವಾಗತಿಸಿದರು. ಪ್ರತಿಷ್ಠಾನದ ಕಾರ್ಯದರ್ಶಿ ದೇವೇಂದ್ರ ಬರಗಾಲೆ ನಿರೂಪಿಸಿದರು. ಪ್ರತಿಷ್ಠಾನದ ಅಧ್ಯಕ್ಷ ಎಸ್.ಬಿ. ಹುಡೇದ ವಂದಿಸಿದರು.

# ಐದು

## ಈಡೇರಿ



LIC ಹಾಗೂ

RBI ನಲ್ಲಿ ಐದು

ವಿಜಯ ಕರ್ನಾಟಕ
e-paper

# ಸೌಹಾರ್ದತೆಗೆ ಧಕ್ಕೆಯಾದ್ರೆ ಸಾಹಿತ್ಯ ದನಿ

**ವಿಕ ಸುದ್ದಿಲೋಕ** ಬಸವಕಲ್ಯಾಣ

ಸಮಾಜ ಮತ್ತು ದೇಶದ ಸೌಹಾರ್ದತೆ, ಸಮಾನತೆಗೆ ಧಕ್ಕೆ ಬಂದಾಗ ಕಾಲದ ದನಿಯಾಗಿದ್ದು, ಸಾಹಿತ್ಯ ಎಂದು ಬೆಂಗಳೂರಿನ ಹಿರಿಯ ಸಾಹಿತಿ ನಾಡೋಜ ಬರಗೂರ ರಾಮಚಂದ್ರಪ್ಪ ಪ್ರತಿಪಾದಿಸಿದರು.

ನಗರದ ಬಸವಕಲ್ಯಾಣ ಎಂಜಿನಿಯರಿಂಗ್ ಕಾಲೇಜಿನಲ್ಲಿ ಡಾ.ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನದಿಂದ ಭಾನುವಾರ ಹಮ್ಮಿಕೊಂಡಿದ್ದ ಉಪನ್ಯಾಸ ಮಾಲೆ-96 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಪ್ರತಿಯೊಬ್ಬರು ಕಾಲದ ದನಿಯಾಗುವ ನಿಟ್ಟಿನಲ್ಲಿ ಪ್ರಾಮಾಣಿಕ ಪಯತ್ನ ಮಾಡಬೇಕು ಎಂದು ಸಲಹೆ ನೀಡಿದರು.

ಕನ್ನಡವನ್ನು ಧರ್ಮ, ಲಿಂಗ ಮತ್ತು ಜಾತಿ ತಾರತಮ್ಯವಿಲ್ಲದೆ ಕಟ್ಟಲಾಗಿದೆ. ಜೈನರು, ಲಿಂಗಾಯತರು, ಬ್ರಾಹ್ಮಣರು, ಕ್ರೈಸ್ತರು ಎಲ್ಲರೂ ಕನ್ನಡ ಜಗತ್ತನ್ನು ಕಟ್ಟಿದ್ದಾರೆ. ಹೀಗಾಗಿ ಕನ್ನಡ ಸಾಹಿತ್ಯ ಎಂದಿಗೂ ಸಮಾನತೆ ಮತ್ತು ಸೌಹಾರ್ದತೆ ಪ್ರತಿಪಾದಿಸುತ್ತದೆ ಎಂದು ತಿಳಿಸಿದರು.



**ಬಸವಕಲ್ಯಾಣ ನಗರದ ಬಸವಕಲ್ಯಾಣ ಎಂಜಿನಿಯರಿಂಗ್ ಕಾಲೇಜಿನಲ್ಲಿ ಭಾನುವಾರ ಡಾ.ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನದ 96ನೇ ಉಪನ್ಯಾಸ ಸಮಾರಂಭದಲ್ಲಿ ಸಾಹಿತಿ ಬರಗೂರ ರಾಮಚಂದ್ರಪ್ಪ ಇತರರಿದ್ದರು.**

ಬೀದರ್ ವಿವಿಯ ಕುಲಪತಿ ಪ್ರೊ.ಬಿ.ಎಸ್. ಬಿರಾದಾರ ಮಾತನಾಡಿ, ಕನ್ನಡ ಸಾಹಿತ್ಯ ಆರಂಭದಿಂದಲೂ ಸಮಾನತೆ ಮತ್ತು ಸೌಹಾರ್ದತೆಯ ಪಾಠ ಮಾಡುತ್ತಾ ಬಂದಿದೆ. ಅದನ್ನು ಗ್ರಹಿಸುವ, ಅರ್ಥೈಸುವ ಪ್ರಯತ್ನ ಮತ್ತೆ ಮಾಡಬೇಕಿದೆ ಎಂದು ಅಭಿಪ್ರಾಯಪಟ್ಟರು.

ಹಿರಿಯ ಸಾಹಿತಿ ಡಾ.ಜಗನ್ನಾಥ ಹೆಬ್ಬಾಳೆ, ಪ್ರತಿಷ್ಠಾನದ ನಿರ್ದೇಶಕ ಡಾ.ಭೀಮಾಶಂಕರ ಬಿರಾದಾರ ಮಾತನಾಡಿದರು. ಕಾಲೇಜು ಪ್ರಾಚಾರ್ಯ ಡಾ.ಅಶೋಕಕುಮಾರ ವಣಗೀರೆ ಅಧ್ಯಕ್ಷತೆ ವಹಿಸಿದ್ದರು. ನಟ ಆಕಾಂಕ್ಷ ಬರಗೂರು, ಡಾ.ಅರುಣಕುಮಾರ ಯಲಾಲ್, ಚಂದ್ರಕಾಂತ ಅಕ್ಕಣ್ಣ, ಸಂಜುಕುಮಾರ ನಡುಕರ, ಶರಣಪ್ಪ ಗದಲೆಗಾಂವ, ಡಾ.ಶಿವಾಜಿ ಮೇತ್ರೆ ಇತರರಿದ್ದರು. ಕುಲಸಚಿವ ಪ್ರೇಮಸಾಗರ ಪಾಟೀಲ ಸ್ವಾಗತಿಸಿದರು. ದೇವೇಂದ್ರ ಬರಗಾಲೆ ನಿರೂಪಿಸಿದರು. ಪ್ರತಿಷ್ಠಾನದ ಅಧ್ಯಕ್ಷ ಎಸ್.ಜಿ.ಹುಡೇದ ವಂದಿಸಿದರು.